# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ),
ನಿಗಮ ಕಾರ್ಯಾಲಯ, ಕವಿಪ್ರನಿನಿ,
ಕಾವೇರಿ ಭವನ, ಬೆಂಗಳೂರು–560009

## ‘ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಸಹಾಯಕ ಇಂಜಿನಿಯರ್(ವಿ/ಸಿವಿಲ್), ಕಿರಿಯ ಇಂಜಿನಿಯರ್(ವಿ/ಸಿವಿಲ್), ಕಿರಿಯ ಆಪ್ತ ಸಹಾಯಕ, ಕಿರಿಯ ಸಹಾಯಕ, ಚಾಲಕ ದರ್ಜೆ–2, ಕಿರಿಯ ಸ್ಟೇಷನ್ ಪರಿಚಾರಕ ಮತ್ತು ಕಿರಿಯ ಪವರ್‌ಮ್ಯಾನ್ (ಕಿರಿಯ ಮಾರ್ಗದಾಳು)’ ಹುದ್ದೆಯ ನೇಮಕಾತಿಯ ಅರ್ಜಿ ಸಲ್ಲಿಸುವಿಕೆಗೆ ಸೂಚನೆಗಳು

1. ಅಭ್ಯರ್ಥಿಗಳು ಅರ್ಜಿಯನ್ನು ಕವಿಪ್ರನಿನಿ ಹಾಗೂ ವಿವಿಧ ವಿದ್ಯುತ್ ಸರಬರಾಜು ಕಂಪನಿಗಳ ಈ ಕೆಳಕಂಡ ವೆಬ್ ಸೈಟ್ ಗಳನ್ನು ಲಾಗ್–ಆನ್ ಮಾಡುವುದರೊಂದಿಗೆ, ಅದರಲ್ಲಿ ಲಭ್ಯವಿರುವ ಅರ್ಜಿ ನಮೂನೆಯಲ್ಲಿಯೇ ವಿವರಗಳನ್ನು ಆನ್–ಲೈನ್ (**On-Line**) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು. ಇನ್ನಿತರ ಯಾವುದೇ ವಿಧಾನದಲ್ಲಿ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**1. www.kptcl.com, 2. www.bescom.org, 3. www.cescmysore.org, 4. www.hescom.co.in, 5. www.mesco.in, 6. www.gescom.in.**

2. ಈ ಅರ್ಜಿ ನಮೂನೆಯನ್ನು ಭರ್ತಿ ಮಾಡುವ ಮುನ್ನ, ನೇಮಕಾತಿ ಅಧಿಸೂಚನೆ ಹಾಗೂ ಇದರೊಂದಿಗೆ ನೀಡಲಾಗುವ ಸೂಚನೆಗಳನ್ನು ಓದಿಕೊಂಡು, ಜಾಗರೂಕತೆಯಿಂದ ಅರ್ಜಿಯನ್ನು ಭರ್ತಿ ಮಾಡಬೇಕು.

3. ಅಭ್ಯರ್ಥಿಗಳು **On-Line** ಮೂಲಕ ಅರ್ಜಿಗಳನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಭರ್ತಿ ಮಾಡತಕ್ಕದ್ದು; ಕೊನೆಯ ದಿನಾಂಕದವರೆಗೆ ಕಾಯದೇ ಮುಂಚಿತವಾಗಿ ಅರ್ಜಿಗಳನ್ನು ಭರ್ತಿ ಮಾಡತಕ್ಕದ್ದು.

4. ಅರ್ಜಿ ಸಲ್ಲಿಸ ಬಯಸುವ ಅಭ್ಯರ್ಥಿಗಳು ಕವಿಪ್ರನಿನಿ ಹಾಗೂ ಯಾವುದಾದರೂ ಒಂದು ವಿದ್ಯುತ್ ಸರಬರಾಜು ಕಂಪನಿಗೆ ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

5. ಅಭ್ಯರ್ಥಿಗಳು ಒಂದು ಅರ್ಜಿಗಿಂತ ಹೆಚ್ಚಿನ ಅರ್ಜಿ ಸಲ್ಲಿಸಿದ್ದಲ್ಲಿ, ಕೊನೆಯದಾಗಿ ಸಲ್ಲಿಸಿರುವ ಅರ್ಹ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು. ಇನ್ನುಳಿದ ಅರ್ಜಿಗಳೊಂದಿಗೆ ಸಲ್ಲಿಸಿರುವ ಅರ್ಜಿ ಶುಲ್ಕವನ್ನು ಯಾವುದೇ ಕಾರಣಕ್ಕೂ ಹಿಂಪಾವತಿಸಲಾಗುವುದಿಲ್ಲ. ಅಭ್ಯರ್ಥಿಗಳು ಆಯ್ಕೆಗಾಗಿ ಕವಿಪ್ರನಿನಿ ಅಥವಾ ವಿದ್ಯುತ್ ಸರಬರಾಜು ಕಂಪನಿಯ ಆದ್ಯತೆಯನ್ನು ಕಡ್ಡಾಯವಾಗಿ ನೀಡುವುದು.

6. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.

7. ಅಭ್ಯರ್ಥಿಗಳು ಯಾವುದೇ ತಪ್ಪು ಮಾಹಿತಿಯನ್ನು ನೀಡದೇ, ಅರ್ಜಿ ಭರ್ತಿ ಮಾಡಲು **On-Line** ನಲ್ಲಿ ನೀಡಿರುವ ಸೂಚನೆಗಳನ್ವಯ ಭರ್ತಿ ಮಾಡತಕ್ಕದ್ದು. ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ಯಾವುದೇ ಮುನ್ಸೂಚನೆ ನೀಡದೆ ತಿರಸ್ಕರಿಸಲಾಗುವುದು.

8. ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳುವುದು.

| | | | | | |
|---|---|---|---|---|---|
| SC | - | Scheduled Caste | ST | - | Scheduled Tribe |
| GM | - | General Merit | Cat-1 | - | Category I |
| IIA | - | Category 2A | IIB | - | Category 2B |
| IIIA | - | Category 3A | IIIB | - | Category 3B |

9. ಪ್ರಕಟಿಸಿರುವ ಹುದ್ದೆಗಳಿಗೆ ನಿಗದಿಪಡಿಸಿರುವ ವಿದ್ಯಾರ್ಹತೆ, ವಯೋಮಿತಿ, ಮೀಸಲಾತಿ ಇತ್ಯಾದಿ ವಿವರಗಳು ಉದ್ಯೋಗ ಪ್ರಕಟಣೆಯಲ್ಲಿ ಲಭ್ಯವಿರುತ್ತದೆ. ಸದರಿ ವಿವರಗಳಿಗಾಗಿ ಕವಿಪ್ರನಿನಿ ಹಾಗೂ ವಿವಿಧ ವಿದ್ಯುತ್ ಸರಬರಾಜು ಕಂಪನಿಗಳ ವೆಬ್‌ಸೈಟ್‌ಗಳಿಗೆ ಭೇಟಿ ನೀಡುವುದು.

**ಟಿಪ್ಪಣಿ:** ಪ್ರಕಟಿಸಿರುವ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಅನಿವಾರ್ಯ ಸಂದರ್ಭಗಳಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ.

10. ಶುಲ್ಕ ಪಾವತಿಸಬೇಕಾದ ವಿಧಾನ ಹಾಗೂ ಸ್ಥಳದ ವಿವರ:

**i) ಅರ್ಜಿ ಶುಲ್ಕ:**

1) ಸಾಮಾನ್ಯ ಅರ್ಹತೆ ಮತ್ತು ಪ್ರವರ್ಗ–I, IIA, IIB, IIIA ಮತ್ತು IIIB ಗೆ ಸೇರಿದ ಅಭ್ಯರ್ಥಿಗಳಿಗೆ - ರೂ.**500/-** (ಐದು ನೂರು ರೂಪಾಯಿಗಳು ಮಾತ್ರ)

2) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳಿಗೆ - ರೂ. **300/-** (ಮೂರು ನೂರು ರೂಪಾಯಿಗಳು ಮಾತ್ರ)

**ಟಿಪ್ಪಣಿ: ವಿಕಲ ಚೇತನ ಅಭ್ಯರ್ಥಿಗಳು (Physically Challenged Candidates) ಅರ್ಜಿ ಶುಲ್ಕ ಪಾವತಿಸುವ ಅವಶ್ಯಕತೆ ಇರುವುದಿಲ್ಲ.**

**ii)** ಅರ್ಜಿ ಶುಲ್ಕವನ್ನು ಕರ್ನಾಟಕದ ಗಣಕೀಕೃತ ಅಂಚೆ ಕಚೇರಿಯಲ್ಲಿ, ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಸಂದಾಯ ಮಾಡಬಹುದಾಗಿದೆ. **ಇದನ್ನು ಹೊರತುಪಡಿಸಿ ಡಿ.ಡಿ., ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.**

- **ದಿನಾಂಕ: 05.03.2019 ರಿಂದ ದಿನಾಂಕ: 05.04.2019 ರವರೆಗೆ ಕರ್ನಾಟಕದ ಗಣಕೀಕೃತ ಅಂಚೆ ಕಚೇರಿಯ ವ್ಯವಹಾರದ ವೇಳೆಯಲ್ಲಿ "ಆನ್ ಲೈನ್" ನಲ್ಲಿ ಲಭ್ಯವಿರುವ 'ಇ–ಅಂಚೆ ಕಛೇರಿ ಚಲನ್' ಮೂಲಕ ಅರ್ಜಿ ಶುಲ್ಕವನ್ನು ಪಾವತಿಸಿದ ಅರ್ಹ ಅರ್ಜಿಗಳನ್ನು ಮಾತ್ರ ನೇಮಕಾತಿಗೆ ಪರಿಗಣಿಸಲಾಗುತ್ತದೆ.**
- **ಅರ್ಜಿ ಶುಲ್ಕವನ್ನು ದಿನಾಂಕ: 05.03.2019 ರಿಂದ ದಿನಾಂಕ: 05.04.2019 ರವರೆಗೆ ಇ– ಅಂಚೆ ಕಛೇರಿ ವ್ಯವಹಾರದ ವೇಳೆಯನ್ನು ಹೊರತುಪಡಿಸಿ, ನಿಗದಿತ ಅವಧಿಯ ಮುಂಚೆ ಅಥವಾ ನಂತರ ಪಾವತಿಸಿದ ಅರ್ಜಿ ಶುಲ್ಕವನ್ನು ಯಾವುದೇ ಸಂದರ್ಭದಲ್ಲಿ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ಇತರೇ ಯಾವುದೇ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ ಮತ್ತು ಅಂತಹ ಅರ್ಜಿಗಳನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.**

11. **Hyderabad-Karnataka ಪ್ರದೇಶ ಮೀಸಲಾತಿಯ ಹುದ್ದೆಗಳು ಹಾಗೂ Non-Hyderabad-Karnataka ಹುದ್ದೆಗಳಿಗೆ ಪ್ರತ್ಯೇಕ ಉದ್ಯೋಗ ಪ್ರಕಟಣೆಯನ್ನು ಹೊರಡಿಸಲಾಗಿದ್ದು, ಈ ಎರಡೂ ಹುದ್ದೆಗಳಿಗೆ ಪ್ರತ್ಯೇಕ ಅರ್ಜಿಯನ್ನು ಸಲ್ಲಿಸುವುದು ಅವಶ್ಯಕವಾಗಿರುತ್ತದೆ.**

12. **ಹೈದರಾಬಾದ್–ಕರ್ನಾಟಕ ವ್ಯಾಪ್ತಿಯ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು, Non-Hyderabad Karnataka (NHK) ವ್ಯಾಪ್ತಿಯ ಹುದ್ದೆಗಳಿಗೂ ಅರ್ಜಿ ಸಲ್ಲಿಸಲು ಇಚ್ಛಿಸಿದಲ್ಲಿ, ಪ್ರಥಮವಾಗಿ Non-Hyderabad Karnataka (NHK) ವ್ಯಾಪ್ತಿಯ ಹುದ್ದೆಗಳಿಗೆ ಅರ್ಜಿ ಸಲ್ಲಿಸಬೇಕಿರುತ್ತದೆ. ತದನಂತರ ಹೈದರಾಬಾದ್–ಕರ್ನಾಟಕ ವ್ಯಾಪ್ತಿಯ ಹುದ್ದೆಗಳಿಗೆ ಅರ್ಜಿ ಸಲ್ಲಿಸಬೇಕು.**

13. **ಅಭ್ಯರ್ಥಿಗಳು On-Line ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಸೂಚನೆಗಳನ್ನು ಕಡ್ಡಾಯವಾಗಿ ಓದಿ ತಿಳಿದುಕೊಳ್ಳತಕ್ಕದ್ದು.**

## ಹಂತ–1

**A)** ಕವಿಪ್ರನಿನಿ ಹಾಗೂ ವಿವಿಧ ವಿದ್ಯುತ್ ಸರಬರಾಜು ಕಂಪನಿಗಳ ವೆಬ್‌ಸೈಟ್‌ನಲ್ಲಿ **"ONLINE APPLICATION FOR VARIOUS POSTS"** ಮೇಲೆ ಕ್ಲಿಕ್ ಮಾಡಿದ ನಂತರ **'Submit Application For the Post of ............................'** ಮೇಲೆ ಕ್ಲಿಕ್‌ಮಾಡಿ ಪರದೆ ಮೇಲೆ ಮೂಡುವ ಎಲ್ಲಾ ವಿವರಗಳನ್ನು ಭರ್ತಿ ಮಾಡಿ '**Preview' button'** ಮೇಲೆ ಕ್ಲಿಕ್ ಮಾಡಿದ ನಂತರ **Preview Page** ಮೂಡುತ್ತದೆ.

**B)** ತಿದ್ದುಪಡಿ ಇದ್ದಲ್ಲಿ **'Edit' button** ಮೇಲೆ ಕ್ಲಿಕ್ ಮಾಡಬೇಕು. **'Edit' button** ಉಪಯೋಗಿಸಿ, ಈ ಹಿಂದೆ ಭರ್ತಿ ಮಾಡಿದ ವಿವರಗಳಲ್ಲಿ ತಪ್ಪಿದ್ದಲ್ಲಿ ಸೂಕ್ತ ತಿದ್ದುಪಡಿಯನ್ನು ಮಾಡಿ ಎಲ್ಲಾ ವಿವರಗಳು ಸರಿಯಾಗಿರುವ ಕುರಿತು ಖಾತರಿ ಪಡಿಸಿಕೊಂಡ ನಂತರ **'Submit' button** ಕ್ಲಿಕ್ ಮಾಡುವುದು.

**C)** ನಂತರ ಅಭ್ಯರ್ಥಿಯ **'Application ID'** ಮತ್ತು **'Verification Code'** ಸಂಖ್ಯೆಗಳನ್ನು ನೀಡಲಾಗುತ್ತದೆ. ಸದರಿ ಸಂಖ್ಯೆಗಳನ್ನು ತಪ್ಪದೇ ಬರೆದಿಟ್ಟುಕೊಂಡು **'Home button'** ಕ್ಲಿಕ್ ಮಾಡುವುದು.

## ಹಂತ–2

**D)** ನಂತರ ಅಭ್ಯರ್ಥಿಯು **'Upload Photo & Signature'** ಕ್ಲಿಕ್ ಮಾಡುವುದು.

**E)** ನಂತರ **Application ID and Date Of Birth** ಯನ್ನು ಭರ್ತಿಮಾಡಿ **Submit button** ಆಯ್ಕೆ ಮಾಡುವುದು.

**F)** ನಂತರ **Photo & Signature** (ಭಾವಚಿತ್ರ ಮತ್ತು ಸಹಿ) ಅಪ್ ಲೋಡ್‌ಗೆ ನೀಡಲಾಗಿರುವ ಪ್ರಮಾಣಕ್ಕನುಗುಣವಾಗಿ **Photo & Signature** (ಭಾವಚಿತ್ರ ಮತ್ತು ಸಹಿ) **Upload** ಮಾಡುವುದು.

**G)** ನಂತರ **Thumb Impression** (ಹೆಬ್ಬೆಟ್ಟಿನ ಗುರುತು) ಅಪ್ ಲೋಡ್‌ಗೆ ನೀಡಲಾಗಿರುವ ಪ್ರಮಾಣಕ್ಕನುಗುಣವಾಗಿ **Thumb Impression** (ಹೆಬ್ಬೆಟ್ಟಿನ ಗುರುತು) **Upload** ಮಾಡುವುದು.

**H)** ನಂತರ **'Home button'** ಕ್ಲಿಕ್ ಮಾಡುವುದು.

## ಹಂತ–3

**I)** ನಂತರ **'Generate Postal Challan' button** ಕ್ಲಿಕ್ ಮಾಡುವುದು.

**J)** ನಂತರ '**Application ID and Date Of Birth**' ಯನ್ನು ಭರ್ತಿಮಾಡಿ '**Submit button**' ಆಯ್ಕೆ ಮಾಡುವುದು.

**K)** ನಂತರ '**E-Post Office Challan**' ಅನ್ನು ಡೌನ್‌ಲೋಡ್ ಮಾಡಿಕೊಂಡು ಇ–ಅಂಚೆ ಕಛೇರಿಯಲ್ಲಿ ಅರ್ಜಿ ಶುಲ್ಕವನ್ನು ಪಾವತಿಸುವುದು.

## ಹಂತ–4

**L)** ನಂತರ **'Print Application' button** ಮೇಲೆ ಕ್ಲಿಕ್ ಮಾಡುವುದು (ಇ–ಅಂಚೆ ಕಛೇರಿಯಲ್ಲಿ ಅರ್ಜಿ ಶುಲ್ಕ ಪಾವತಿಯ **48 ಗಂಟೆಗಳ ನಂತರ**). ನಂತರ **'Application ID and Date Of Birth'** ಯನ್ನು ನಮೂದಿಸಿ **'Submit' button**' ಮೇಲೆ ಕ್ಲಿಕ್‌ಮಾಡಿ ಅರ್ಜಿಯ ಮುದ್ರಣ ಪ್ರತಿ ಪಡೆಯುವುದು.

ಅಭ್ಯರ್ಥಿಗಳು **ON LINE** ಮೂಲಕ ಅರ್ಜಿಯನ್ನು ಭರ್ತಿ ಮಾಡುವಾಗ, ಈ ಕೆಳಗಿರುವ ಅಂಶಗಳನ್ನು ತಪ್ಪದೇ ಗಮನಿಸುವುದು:

| ಅಂಕಣ | ಭರ್ತಿ ಮಾಡಬೇಕಾದ ಮಾಹಿತಿ | | ಷರಾ (ಭರ್ತಿ ಮಾಡುವ ವಿವರ) |
|---|---|---|---|
| 1. | Applicant's Full Name | ಅಭ್ಯರ್ಥಿಯ ಪೂರ್ಣ ಹೆಸರು | ಎಸ್.ಎಸ್.ಎಲ್.ಸಿ. / ಹತ್ತನೇ ತರಗತಿಯ ಅಂಕಪಟ್ಟಿಯಲ್ಲಿ ನಮೂದಿಸಿರುವಂತೆ |
| 2. | Mother's Name | ತಾಯಿಯ ಹೆಸರು | ಎಸ್.ಎಸ್.ಎಲ್.ಸಿ. / ಹತ್ತನೇ ತರಗತಿಯ ಅಂಕಪಟ್ಟಿಯಲ್ಲಿ ನಮೂದಿಸಿರುವಂತೆ [ಇದ್ದಲ್ಲಿ] |
| 3. | Father's Name | ತಂದೆಯ ಹೆಸರು | ಎಸ್.ಎಸ್.ಎಲ್.ಸಿ. / ಹತ್ತನೇ ತರಗತಿಯ ಅಂಕಪಟ್ಟಿಯಲ್ಲಿ ನಮೂದಿಸಿರುವಂತೆ |
| 4. | Reservation of Category | ಮೀಸಲಾತಿ ಪ್ರವರ್ಗ | ಸಾಮಾನ್ಯ ಅರ್ಹತೆ/ ಪ್ರವರ್ಗI / IIA / IIB / IIIA / IIIB / ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿ ಸಂಬಂಧಿಸಿದ ಪ್ರವರ್ಗವನ್ನು ಆಯ್ಕೆ ಮಾಡಿಕೊಳ್ಳುವುದು. |
| 5. | Date of Birth | ಜನ್ಮ ದಿನಾಂಕ | ಎಸ್.ಎಸ್.ಎಲ್.ಸಿ. / ಹತ್ತನೇ ತರಗತಿಯ ಅಂಕಪಟ್ಟಿಯಲ್ಲಿ ನಮೂದಿಸಿರುವಂತೆ |
| 6. | Address for communication | ಪೂರ್ಣ ವಿಳಾಸ | ಪೂರ್ಣ ವಿಳಾಸವನ್ನು ಸರಿಯಾಗಿ ಭರ್ತಿ ಮಾಡುವುದು |
| 7. | Mobile No. | ಮೊಬೈಲ್ ಸಂಖ್ಯೆ | ಮೊಬೈಲ್ ಸಂಖ್ಯೆ ಭರ್ತಿ ಮಾಡುವುದು |
| 8. | Email Address | ಇ–ಮೇಲ್ | ಇ–ಮೇಲ್ ವಿಳಾಸ ಭರ್ತಿ ಮಾಡುವುದು |
| 9. | Gender | ಲಿಂಗ | ಗಂಡು/ಹೆಣ್ಣು |
| 10. | Marital Status | ವೈವಾಹಿಕ ಸ್ಥಿತಿ | ವಿವಾಹಿತ/ಅವಿವಾಹಿತ |
| 11. | Rural Applicant | ಗ್ರಾಮೀಣ ಅಭ್ಯರ್ಥಿ | 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವ್ಯಾಸಂಗ ಮಾಡಿರಬೇಕು. |
| 12. | KMS | ಕನ್ನಡ ಮಾಧ್ಯಮ ಅಭ್ಯರ್ಥಿ | 1 ರಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರಬೇಕು |
| 13. | PH | ವಿಕಲಚೇತನ ಅಭ್ಯರ್ಥಿ | |
| 14. | PDP | ಯೋಜನೆ ನಿರಾಶ್ರಿತ ಅಭ್ಯರ್ಥಿ | |
| 15. | Ex-Serviceman | ಮಾಜಿ ಸೈನಿಕ ಅಭ್ಯರ್ಥಿ | |
| 16. | Are you claiming age relaxation under the provisions of Rule KEB R & P Regulations/ KEB R & P | KEB R & P □□□□□□□□□□□ □□□□□ □□□□□□□□ □□□□□□□□ □□□□□□□ □□□□□□□□ವಿರಾ ? | ಸಂಬಂಧಿಸಿದ ರಿಯಾಯಿತಿಯನ್ನು ಆಯ್ಕೆ ಮಾಡಿಕೊಂಡು, ಅರ್ಹ ಸೇವಾ ಅವಧಿಯನ್ನು ನಮೂದಿಸುವುದು (ಅರ್ಹರಿದ್ದಲ್ಲಿ) |
| 17. | Have you Studied Kannada Language in SSLC or 10th Standard- 1st Language or 2nd Language or Medium of Instruction in Kannada or PUC- 1st Language or 2nd Language or Studied Kannada Language in any other higher examination | ನೀವು ಎಸ್.ಎಸ್.ಎಲ್.ಸಿ./10ನೇ ತರಗತಿಯಲ್ಲಿ ಕನ್ನಡ ಭಾಷೆಯನ್ನು ಮೊದಲನೇ/ಎರಡನೇ ಭಾಷೆಯನ್ನಾಗಿ ಅಥವಾ ಮಾಧ್ಯಮವನ್ನಾಗಿ ಅಭ್ಯಸಿಸಿರುವಿರಾ? ಅಥವಾ ಪಿಯುಸಿಯಲ್ಲಿ ಕನ್ನಡ ಭಾಷೆಯನ್ನು ಮೊದಲನೇ/ ಎರಡನೇ ಭಾಷೆಯನ್ನಾಗಿ ಅಭ್ಯಸಿಸಿರುವಿರಾ? ಅಥವಾ ಉನ್ನತ ಪರೀಕ್ಷೆಯಲ್ಲಿ ಕನ್ನಡ ಭಾಷೆಯನ್ನು ಅಭ್ಯಸಿಸಿರುವಿರಾ? | ಹೌದು/ಇಲ್ಲ (ಯಾವುದಾದರೂ ಒಂದನ್ನು ಆಯ್ಕೆ ಮಾಡಿಕೊಳ್ಳುವುದು). (ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಸಹಾಯಕ ಇಂಜಿನಿಯರ್(ವಿ/ಸಿವಿಲ್) ಹುದ್ದೆಗಳಿಗೆ ಮಾತ್ರ ಅನ್ವಯವಾಗುತ್ತದೆ) |
| 18. | Select Company | ಕಂಪನಿ ಆಯ್ಕೆ ಮಾಡಿಕೊಳ್ಳುವುದು | ಕವಿಪ್ರನಿನಿ ಅಥವಾ ಯಾವುದಾದರೂ ಒಂದು ವಿದ್ಯುತ್ ಸರಬರಾಜು ಕಂಪನಿ ಆಯ್ಕೆ ಮಾಡಿಕೊಳ್ಳುವುದು. |

| | | | |
|---|---|---|---|
| 19. | SSLC Registration No | ಎಸ್.ಎಸ್.ಎಲ್.ಸಿ ಅಥವಾ **10**ನೇ ತರಗತಿ ನೋಂದಣಿ ಸಂಖ್ಯೆ | ನೋಂದಣಿ ಸಂಖ್ಯೆ ನಮೂದಿಸುವುದು. |
| 20. | Select your qualification | ವಿದ್ಯಾರ್ಹತೆಯನ್ನು ಆಯ್ಕೆ ಮಾಡಿಕೊಳ್ಳುವುದು. | |
| 21. | Name of the College/Institution and University | ಕಾಲೇಜು ಮತ್ತು ವಿಶ್ವವಿದ್ಯಾಲಯದ ಹೆಸರು | ಸಂಬಂಧಿಸಿದ ಕಾಲೇಜು ಮತ್ತು ವಿಶ್ವವಿದ್ಯಾಲಯದ ಹೆಸರು ನಮೂದಿಸುವುದು. |
| 22. | Total Marks Secured(for all the semesters/years) | ಗಳಿಸಿದ ಅಂಕ | ಗಳಿಸಿದ ಅಂಕಗಳನ್ನು ಭರ್ತಿಮಾಡುವುದು [ಅಂಕ ಪಟ್ಟಿಯಲ್ಲಿ ಇರುವಂತೆ] |
| 23. | Maximum Marks(for all the semesters/years) | ಗರಿಷ್ಠ ಅಂಕ | ಗರಿಷ್ಠ ಅಂಕಗಳನ್ನು ಭರ್ತಿಮಾಡುವುದು [ಅಂಕ ಪಟ್ಟಿಯಲ್ಲಿ ಇರುವಂತೆ) |
| 24. | Select Test Centre | ಪರೀಕ್ಷಾ ಕೇಂದ್ರದ ಆಯ್ಕೆ | Test Centre ಆಯ್ಕೆ ಮಾಡುವುದು. |
| 25. | Are You State/Central Government Servant ? | ನೀವು ರಾಜ್ಯ/ಕೇಂದ್ರದ ಸರ್ಕಾರಿ ಸೇವೆಯಲ್ಲಿ ಇರುವಿರಾ? | ಸರ್ಕಾರಿ ಸೇವೆಯಲ್ಲಿ ಇದ್ದಲ್ಲಿ/ಇಲ್ಲದಿದ್ದಲ್ಲಿ – ಹೌದು/ಇಲ್ಲ. |
| 26. | Do you claim age Relaxation? If yes, select accordingly. | ನೀವು ವಯೋಮಿತಿಯಲ್ಲಿ ರಿಯಾಯಿತಿ ಕೋರುವಿರಾ? | ಸಂಬಂಧಿಸಿದ ರಿಯಾಯಿತಿಯನ್ನು ಆಯ್ಕೆ ಮಾಡಿಕೊಂಡು, ಅರ್ಹ ಸೇವಾ ಅವಧಿಯನ್ನು ನಮೂದಿಸುವುದು (ಅರ್ಹರಿದ್ದಲ್ಲಿ) |
| 27. | Are you presently working? | ನೀವು ಪ್ರಸ್ತುತ ಕೆಲಸದಲ್ಲಿ ಇರುವಿರಾ? | ಹೌದು/ಇಲ್ಲ (ಯಾವುದಾದರೂ ಒಂದನ್ನು ಆಯ್ಕೆ ಮಾಡಿಕೊಳ್ಳುವುದು). |
| 28. | Have you ever been dismissed from your services? | ಸೇವೆಯಿಂದ ಎಂದಾದರೂ ವಜಾಗೊಂಡಿದ್ದೀರಾ? | ಹೌದು/ಇಲ್ಲ (ಯಾವುದಾದರೂ ಒಂದನ್ನು ಆಯ್ಕೆ ಮಾಡಿಕೊಳ್ಳುವುದು). |

* ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: **05.03.2019**

* ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: **04.04.2019**

* ಅರ್ಜಿ ಶುಲ್ಕ ಪಾವತಿಗೆ ಕೊನೆಯ ದಿನಾಂಕ: **05.04.2019**

<u>ಸೂಚನೆ:</u> **On-line** ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಸ್ಪಷ್ಟೀಕರಣಕ್ಕಾಗಿ ಕಚೇರಿಯ ಕೆಲಸದ ವೇಳೆಯಲ್ಲಿ ಈ ಕೆಳಕಂಡ ಸಹಾಯವಾಣಿಗಳನ್ನು ಬೆಳಗ್ಗೆ 10:30 ಗಂಟೆಯಿಂದ ಸಂಜೆ 5:00 ಗಂಟೆಯವರೆಗೆ ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆಯುವುದು.

| | | |
|---|---|---|
| **ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ** | : | 080-22211527<br>EXT: 3789, 3872 |
| **ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ** | : | 080-22258788 |
| **ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ** | : | 0836-2223865<br>0836-2223867 |
| **ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ** | : | 0821-2343384 |
| **ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ** | : | 08472-256647<br>08472-239004 |
| **ಮಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ** | ; | 0824-2885759 |

**ಇತರೆ ಷರತ್ತುಗಳು:**

1. ಭಾರತೀಯ ನಾಗರೀಕನಾಗಿರತಕ್ಕದ್ದು.
2. ಒಬ್ಬ ಜೀವಂತ ಪತಿ/ಪತ್ನಿಗಿಂತ ಹೆಚ್ಚು ಮಂದಿ ಪತಿ/ಪತ್ನಿಯರನ್ನು ಹೊಂದಿರುವ ಮತ್ತು ಈಗಾಗಲೇ ಇನ್ನೊಬ್ಬ ಪತಿ/ಪತ್ನಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಪುರುಷ/ಮಹಿಳಾ ಅಭ್ಯರ್ಥಿಯುನೇಮಕಾತಿಗೆ ಅರ್ಹರಾಗುವುದಿಲ್ಲ.
3. ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.
4. ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಕಾಯ್ದಿರಿಸಿಕೊಂಡಿದೆ.
5. ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಅಧಿಸೂಚನೆಯಲ್ಲಿ ತಿಳಿಸಿರುವ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ಮಾತ್ರ ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.
6. **ಶೈಕ್ಷಣಿಕ ವಿದ್ಯಾರ್ಹತೆ:** ಅಧಿಸೂಚಿಸಿದ ಹುದ್ದೆಯ ಮುಂದೆ ಸೂಚಿಸಿರುವ ವಿದ್ಯಾರ್ಹತೆಯನ್ನು, ದಿನಾಂಕ 04.04.2019 ಕ್ಕೆ ಮೊದಲು ಅಭ್ಯರ್ಥಿಗಳು ಹೊಂದಿರಬೇಕು. ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಅರ್ಜಿಯಲ್ಲಿ ಸ್ಪಷ್ಟವಾಗಿ ನಮೂದಿಸಬೇಕು.
7. ಪ್ರಮಾಣ ಪತ್ರದಲ್ಲಿ ನಮೂದಿಸಿರುವ 'ಪಡೆದ ಅಂಕ' ಗಳನ್ನು ಮತ್ತು 'ಗರಿಷ್ಟ ಅಂಕ' ಗಳನ್ನು ತಪ್ಪದೇ ನಮೂದಿಸಬೇಕು.
8. ಅಂಕಗಳು ವ್ಯತ್ಯಾಸ ಕಂಡು ಬಂದಲ್ಲಿ ಅಭ್ಯರ್ಥಿಯೇ ಜವಾಬ್ದಾರರಾಗಿರುತ್ತಾರೆ.
9. **ವಯೋಮಿತಿ:** ಅಧಿಸೂಚನೆಯಲ್ಲಿ ಹುದ್ದೆಯ ಮುಂದೆ ಸೂಚಿಸಿದಂತೆ, ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ನಿಗದಿತ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು. ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವ ಮಟ್ಟಿಗೆ ಹೆಚ್ಚಿಸಲಾಗುವುದು.
   - ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವರು ಕೇಂದ್ರ ಸಶಸ್ತ್ರ ದಳದಲ್ಲಿ ಸೇವೆ ಸಲ್ಲಿಸಿರುವ ಅವಧಿಗೆ ಮೂರು ವರ್ಷಗಳನ್ನು ಸೇರಿಸಿ, ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಗರಿಷ್ಠ 45 ವರ್ಷಗಳವರೆಗೆ ವಯೋಮಿತಿಯಲ್ಲಿ ಸಡಿಲಿಕೆಯನ್ನು ನೀಡಲಾಗುವುದು.
   - ಕವಿಪ್ರನಿನಿ/ ಎಸ್ಕಾಂ ನಿಗಮ/ ಕಂಪನಿಗಳಲ್ಲಿ ಈಗಾಗಲೇ ಖಾಯಂ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದರೆ, ಅಂತಹ ಅಭ್ಯರ್ಥಿಗಳಿಗೆ ಗರಿಷ್ಠ ವಯೋಮಿತಿಯಲ್ಲಿ, ಅವರು ಕವಿಪ್ರನಿನಿ/ ಎಸ್ಕಾಂ ನಿಗಮ/ ಕಂಪನಿಗಳಲ್ಲಿ ಸೇವೆ ಸಲ್ಲಿಸಿರುವ ಅವಧಿಯಷ್ಟು, ಗರಿಷ್ಠ ಏಳು ವರ್ಷಗಳ ಮಿತಿಗೊಳಪಟ್ಟು ವಯೋಮಿತಿಯಲ್ಲಿ ಸಡಿಲಿಕೆಯನ್ನು ನೀಡಲಾಗುವುದು.
   - ಕವಿಪ್ರನಿನಿ ಮತ್ತು ಎಸ್ಕಾಂಗಳಲ್ಲಿ ಸಹಾಯಕ ಇಂಜಿನಿಯರ್(ವಿ) ಮತ್ತು ಕಿರಿಯ ಇಂಜಿನಿಯರ್(ವಿ) ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಹೊಂದಿ ಸೇವೆ ಸಲ್ಲಿಸಿರುವ/ಸೇವೆ ಸಲ್ಲಿಸುತ್ತಿರುವವರಿಗೆ, ಸೇವೆ ಸಲ್ಲಿಸಿರುವ ಆವಧಿಯಷ್ಟು ಅಥವಾ ಗರಿಷ್ಟ ಐದು (5) ವರ್ಷಗಳ ಮಿತಿಗೊಳಪಟ್ಟು ವಯೋಮಿತಿಯಲ್ಲಿ ಸಡಿಲಿಕೆಯನ್ನು ನೀಡಲಾಗುವುದು [ಸಹಾಯಕ ಇಂಜಿನಿಯರ್(ವಿ) ಮತ್ತು ಕಿರಿಯ ಇಂಜಿನಿಯರ್(ವಿ) ಹುದ್ದೆಗಳಿಗೆ ಮಾತ್ರ].
10. **ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು:** ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿತ ತಹಸೀಲ್ದಾರ್‌ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಅಂದರೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳನ್ನು ಕೆಳಗೆ ತಿಳಸಲಾಗಿರುವ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಸಲ್ಲಿಸಲ್ಪಡುವ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು. **ಶೈಕ್ಷಣಿಕ ಉದ್ದೇಶಕ್ಕಾಗಿ ನೀಡಲಾಗುವ ಜಾತಿ/ಆದಾಯ ಪ್ರಮಾಣ ಪತ್ರಗಳನ್ನು ಪರಿಗಣಿಸಲು ಅವಕಾಶವಿರುವುದಿಲ್ಲ.**

| | | |
|---|---|---|
| ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು | : | ನಮೂನೆ- 'ಡಿ' |
| ಆ) ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು | : | ನಮೂನೆ- 'ಇ' |
| ಇ) ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು | : | ನಮೂನೆ- 'ಎಫ್' |

11. **ಗ್ರಾಮೀಣ ಅಭ್ಯರ್ಥಿ:** ಕಾಲಕಾಲಕ್ಕೆ ಕರ್ನಾಟಕ ಸರ್ಕಾರ ಆದೇಶದನ್ವಯ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರಾಗಿರುತ್ತಾರೆ. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2ನ್ನು

ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2ರಲ್ಲಿ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು ಪಡೆದು ಸಲ್ಲಿಸುವುದು (ಇತರೆ ನಮೂನೆಗಳಲ್ಲಿ ಸಲ್ಲಿಸಲ್ಪಡುವ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು ಹಾಗೂ ಅಂತಹ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ).

12. **<u>ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ:</u>** ಕಾಲಕಾಲಕ್ಕೆ ಕರ್ನಾಟಕ ಸರ್ಕಾರ ಆದೇಶದನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದು ಮೂಲ ದಾಖಲಾತಿಗಳನ್ನು ಪರಿಶೀಲನೆಗೆ 'ದೃಢೀಕೃತ ನಕಲು ಪ್ರತಿ' ಯೊಂದಿಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು.

13. **<u>ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ:</u>** ಸರ್ಕಾರಿ ಆದೇಶ ಸಂಖ್ಯೆ: ಡಿಪಿಎಆರ್ 23 ಎಸ್‌ಆರ್‌ಆರ್ 99, ದಿನಾಂಕ: 23.11.2000 ರನ್ವಯ ಯೋಜನೆಗಳಿಂದ ನಿರಾಶ್ರಿತರಾದ (ಈ ನಿಯಮಗಳು ಜಾರಿಯಾಗುವ 20 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳು ಈ ಮೀಸಲಾತಿಗೆ ಅನ್ವಯವಾಗುವುದಿಲ್ಲ) ಕುಟುಂಬದ ಅಭ್ಯರ್ಥಿಗಳು ಸರ್ಕಾರಿ ಸುತ್ತೋಲೆ ಸಂಖ್ಯೆ: ಸಿಆಸುಇ 44 ಸೇನೇನಿ, ದಿನಾಂಕ: 27.07.2001 ರಲ್ಲಿ ನಿಗದಿಪಡಿಸಲಾದ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಸಂಬಂಧಿಸಿದ ತಹಶೀಲ್ದಾರ್ ರವರಿಂದ ಆಸ್ತಿಯನ್ನು ಸ್ವಾಧೀನಪಡಿಸಿಕೊಂಡಿರುವ ದಿನಾಂಕವನ್ನು ಸ್ಪಷ್ಟವಾಗಿ ನಮೂದಿಸಿರುವ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳು ಯೋಜನಾ ನಿರಾಶ್ರಿತ ಮೀಸಲಾತಿಗೆ ಅನರ್ಹರಾಗಿರುತ್ತಾರೆ.

14. **<u>ಹೈದರಾಬಾದ್-ಕರ್ನಾಟಕ ಮೀಸಲಾತಿ:</u>** ಹೈದರಾಬಾದ್-ಕರ್ನಾಟಕ ವ್ಯಾಪ್ತಿಯಡಿಯಲ್ಲಿ [ಅನುಚ್ಛೇದ-371(ಜೆ)] ಮೀಸಲಾತಿ ಪಡೆಯಬಯಸುವ ಅಭ್ಯರ್ಥಿಗಳು, ಸರ್ಕಾರದ ಅಧಿಸೂಚನೆ-1 ಮತ್ತು 2 ಸಂಖ್ಯೆ: ಡಿಪಿಎಆರ್ 43 ಹೆಚ್‌ಕೆಸಿ 2013, ದಿನಾಂಕ: 29.01.2014 ರ ಅನ್ವಯ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ಆದೇಶ, 2013 ರ ಅಡಿಯಲ್ಲಿ ಸಕ್ಷಮ ಪ್ರಾಧಿಕಾರದಿಂದ ಸೂಕ್ತ ಪ್ರಮಾಣ ಪತ್ರಗಳನ್ನು ಪಡೆದು ಸಲ್ಲಿಸಬೇಕು.

15. **<u>ದುರ್ನಡತೆ:</u>** ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ಮೂಲ ದಾಖಲಾತಿ ಪರಿಶೀಲನೆ ಸಮಯದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅವನು ಸ್ವತಃ ಕ್ರಿಮಿನಲ್ ಮೊಕದ್ದಮೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ. ಹುದ್ದೆಯ ಆಯ್ಕೆ/ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

16. **<u>ಅಂಗವಿಕಲ ಅಭ್ಯರ್ಥಿ:</u>** ದಿನಾಂಕ: 25.02.2019 ರ ನೇಮಕಾತಿ ಅಧಿಸೂಚನೆಯಲ್ಲಿ ವಿವರವಾಗಿ ತಿಳಿಸಲಾಗಿರುತ್ತದೆ.

17. **<u>ಕಂಪನಿಯೊಂದಿಗೆ ಪತ್ರ ವ್ಯವಹಾರ:</u>** ಅಭ್ಯರ್ಥಿಯು ನೇಮಕಾತಿಗೆ ಸಂಬಂಧಿಸಿದಂತೆ ಕಂಪನಿಯೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸಲು ಅವಕಾಶವಿರುವುದಿಲ್ಲ.

18. ವಿಳಾಸ ಬದಲಾವಣೆಗೆ ಅಭ್ಯರ್ಥಿಗಳಿಗೆ ಆಸ್ಪದ ಇರುವುದಿಲ್ಲ. ಆದಾಗ್ಯೂ ಈ ವಿಚಾರದಲ್ಲಿ ಕಂಪನಿಯು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಕುರಿತು ಅಭ್ಯರ್ಥಿಗಳು ಎಚ್ಚರವಹಿಸತಕ್ಕದ್ದು.

19. ಇತರೆ ನಮೂನೆಗಳಲ್ಲಿ ಅಥವಾ ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ಅಂತಹ ಅರ್ಜಿದಾರರ ಮೀಸಲಾತಿಯನ್ನು/ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು.

**<u>ವಿಶೇಷ ಸೂಚನೆಗಳು:</u>**

1. ON-LINE ಮೂಲಕ ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಕುರಿತು ಖಚಿತಪಡಿಸಿಕೊಂಡು ನಂತರ ಅದರ ಒಂದು ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತೆಗೆದಿಟ್ಟುಕೊಂಡಿರತಕ್ಕದ್ದು.

2. ಈಗಾಗಲೇ ಸರ್ಕಾರದ ಸೇವೆಯಲ್ಲಿರುವ/ಸೇವೆ ಸಲ್ಲಿಸಿದ ಅಭ್ಯರ್ಥಿಗಳು ಅವರುಗಳ ನೇಮಕಾತಿ ಪ್ರಾಧಿಕಾರಿಗಳಿಂದ, ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಅನುಮತಿಯನ್ನು (**No Objection Certificate**) ಪಡೆದಿಟ್ಟುಕೊಂಡಿರತಕ್ಕದ್ದು.

3. ಅರ್ಜಿಗಳನ್ನು ಭರ್ತಿ ಮಾಡಲು ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ನಂತರದ ಕೆಲಸದ ದಿನವು ಅರ್ಜಿಗಳನ್ನು ಭರ್ತಿ ಮಾಡಲು ಕೊನೆಯ ದಿನಾಂಕವಾಗುವುದು.

4. **ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸಿರುವ ಮೀಸಲಾತಿ, ಜನ್ಮ ದಿನಾಂಕ, ವಿದ್ಯಾರ್ಹತೆ ಹಾಗೂ ವಯೋಮಿತಿ ಸಡಿಲಿಕೆ ಇತ್ಯಾದಿ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.**

5. ಅರ್ಜಿ ಶುಲ್ಕವನ್ನು ಪಾವತಿಸದೆ ಇರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**ಅರ್ಜಿ ಸಂಬಂಧಿತ ವಿಚಾರಣೆಗೆ:**

**ಬೆಳಗ್ಗೆ 10:30 ರಿಂದ ಸಂಜೆ 5:00 ರವರೆಗೆ**

**ದೂರವಾಣಿ ಸಂಖ್ಯೆ:**

| | | |
|---|---|---|
| **ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ** | : | **080–22211527**<br>**EXT: 3789, 3872** |
| **ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ** | : | **080–22085061** |
| **ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ** | : | **0836–2223865**<br>**0836–2223867** |
| **ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ** | : | **0821–2343384** |
| **ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ** | : | **08472–256647**<br>**08472–239004** |
| **ಮಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ** | ; | **0824–2885759** |

**ಅರ್ಜಿ ಶುಲ್ಕ ಪಾವತಿ ವಿಚಾರಣೆಗಾಗಿ:**

ಅಭ್ಯರ್ಥಿಗಳು ಅರ್ಜಿ ಶುಲ್ಕ ಪಾವತಿಸಿರುವ ಬಗ್ಗೆ **www.karnatakapost.gov.in** ನಲ್ಲಿ ಅರ್ಜಿ ಶುಲ್ಕ ಪಾವತಿಸಿದ **48** ಗಂಟೆಗಳ ನಂತರ ದೃಢಪಡಿಸಿಕೊಳ್ಳಬಹುದಾಗಿದೆ. ಪಾವತಿ ಸಂದರ್ಭದಲ್ಲಿ ಯಾವುದೇ ಸ್ಪಷ್ಟೀಕರಣಕ್ಕಾಗಿ ಅಭ್ಯರ್ಥಿಗಳು ಅಂಚೆ ಕಚೇರಿ ಸಹಾಯವಾಣಿ ದೂರವಾಣಿ ಸಂಖ್ಯೆ: **080–22392668, (ಸೋಮವಾರ ದಿಂದ ಶುಕ್ರವಾರ ವರೆಗೆ, ಸಮಯ ಬೆಳಗ್ಗೆ 09:30 ರಿಂದ ಸಂಜೆ 05:00 ಗಂಟೆಯವರೆಗೆ)** ಸಂಪರ್ಕಿಸುವುದು.

**ಸಹಿ/–**
**ನಿರ್ದೇಶಕರು**
**(ಆಡಳಿತ ಮತ್ತು ಮಾನವ ಸಂಪನ್ಮೂಲ)**
**ಕವಿಪ್ರನಿನಿ**